ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಫ್ಯಾನ್ಸಿ ನೋಂದಣಿ ಸಂಖ್ಯೆ ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನ ಸಭೆ ಕ್ಷೇತ್ರದಿಂದ ಚುನಾಯಿತರಾದವರು):-

613 (731) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನೋಂದಣಿಯಾಗುವ ವಿವಿಧ ವಾಹನಗಳಿಗೆ ವಾಹನಗಳ ಮಾಲೀಕರು ನಿರ್ಧಿಷ್ಟ ಸಂಖ್ಯೆ (fancy number) ಪಡೆಯಲು ಅವಕಾಶವಿದೆಯೇ; ಹಾಗಿದ್ದಲ್ಲಿ, ನಿಯಮಾವಳಿಯ ಮಾಹಿತಿ ಒದಗಿಸುವುದು;

(ಆ) ಫ್ಯಾನ್ಸಿ ನೋಂದಣಿ ಸಂಖ್ಯೆಗಳನ್ನು ಇಲಾಖೆಯ ಹರಾಜು ಮಾಡುತ್ತಿರುವುದು ನಿಜವೇ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಫ್ಯಾನ್ಸಿ ಸಂಖ್ಯೆಗಳ ಹರಾಜಿನಿಂದ ಸಂಗ್ರಹವಾಗಿರುವ ಹಣವೆಷ್ಟು; (ಜಿಲ್ಲಾವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಫ್ಯಾನ್ಸಿ ನೋಂದಣಿ ಸಂಖ್ಯೆಗಳನ್ನು ಪಡೆಯಲು ವಾಹನ ಮಾಲೀಕರು ಮತ್ತು ಅಧಿಕಾರಿಗಳು ಶಾಮೀಲಾಗಿ ಸರ್ಕಾರಕ್ಕೆ ನಷ್ಟ ಉಂಟು ಮಾಡುತ್ತಿರುವುದು ನಿಜವೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಇದುವರೆವಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)